ಎಲ್.ಎ.ಸಿ ನಂ. 4/2023 ಪಿ.ಡಬ್ಲ್ಯೂ- 1

**ಸಾಕ್ಷಿಯನ್ನು ದಿನಾಂಕ 1.2.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಪಾಟೀ ಸವಾಲುಃ ಮಾನ್ಯ ಎ.ಜಿ.ಪಿ ರವರಿಂದಃ</u>**

ನನ್ನ ತಂದೆ ಎದುರುದಾರರ ಕಛೇರಿಯಿಂದ ಭೂಸ್ವಾಧೀನಗೊಂಡಿರುವ ಬಗ್ಗೆ ಪರಿಹಾರ ಪಡೆದು 15 ವರ್ಷವಾಗಿರುತ್ತದೆ. ಇಟ್ನಾ ಗ್ರಾಮದ ಸರ್ವೆ ನಂ.105/1 ರ 05 ಗುಂಟೆ ಜಮೀನು ಭೂಸ್ವಾಧೀನವಾಗಿರುತ್ತದೆ. ಎದುರುದಾರರ ಕಛೇರಿಯಿಂದ ಪರಿಹಾರ ಹಣವನ್ನು ಪಡೆದುಕೊಳ್ಳಲು ನಮೂನೆ-12(2) ನ್ನು 15 ವರ್ಷಗಳ ಹಿಂದೆ ಪಡೆದಿರುತ್ತೇನೆ. ಭೂಸ್ವಾಧೀನವಾಗಿ ಉಳಿದಿರುವ ಆಸ್ತಿಯು ಇಂಡೀಕರಣವಾಗಿರುವ ಬಗ್ಗೆ ಪಹಣಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರದಲ್ಲಿ ಹೇಳಿರುವ ವಿಚಾರಗಳು ನನಗೆ ಗೊತ್ತಿರುತ್ತದೆ. ನಿಗದಿತ ಅವಧಿಯೊಳಗೆ ಹೆಚ್ಚಿನ ಪರಿಹಾರ ಸಿಗಬೇಕೆಂದು ಅರ್ಜಿ ಸಲ್ಲಿಸಲು ತೊಂದರೆ ಇರುವುದಿಲ್ಲ. ಭೂಸ್ವಾಧೀನವಾಗಿರುವ ಜಮೀನಿನಲ್ಲಿ ಬೆಳೆ ಬೆಳೆಯಲು ನೀರಿನ ವ್ಯವಸ್ಥೆಗಾಗಿ ಬೋರ್ವೆಲ್ ಇರಲಿಲ್ಲ. ಸಾಕ್ಷಿದಾರರು ಮುಂದುವರೆದು ಕೆರೆಯ ನೀರನ್ನು ಉಪಯೋಗಿಸುತ್ತಿದ್ದೆವು ಎನ್ನುವರು. ಹತ್ತಿ, ಟೊಮಟೋ ಮತ್ತು ಬೀನ್ಸ ಬೆಳೆಯಲು ನೀರಾವರಿ ಸೌಲಭ್ಯ ಬೇಕು ಎಂದರೆ ಸರಿ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವಂತೆ 1 ಎಕರೆಯಲ್ಲಿ ವರ್ಷಕ್ಕೆ 1 ಲಕ್ಷ ಆದಾಯ ಪಡೆಯುತ್ತಿದ್ದ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುವುದಿಲ್ಲ. ನಿಪಿ1 ರಲ್ಲಿ ಹೇಳಿರುವ ಆಸ್ತಿಯು ನಮ್ಮ ಜಮೀನಿನ ಪಕ್ಕದಲ್ಲಿರುತ್ತಾರೆ. ಅವರಿಗೆ ಸಂಬಂಧಿಸಿದ ಎಷ್ಟು ಜಮೀನು ಭೂ ಸ್ವಾಧೀನ ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಈಗಾಗಲೇ ಎದುರುದಾರರು ಮಾರುಕಟ್ಟೆ ಮೌಲ್ಯಕ್ಕೆ ಅನುಗುಣವಾಗಿ ಪರಿಹಾರ ನೀಡಿದ್ದು ನಾನು ಹೆಚ್ಚಿನ ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ನಾನು ನಿಗದಿತ ಸಮಯದಲ್ಲಿ ಹೆಚ್ಚಿನ ಪರಿಹಾರ ಕೋರಿ ಅರ್ಜಿ ಸಲ್ಲಿಸದಿರುವುದರಿಂದ ನಾನು ಯಾವುದೇ ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ಕಾಲ ವಿಳಂಬವಾಗಿ ಅರ್ಜಿ ಸಲ್ಲಿಸಿರುವ ವಿಚಾರ ಗೊತ್ತಿದ್ದರೂ ಸಹ ಸರ್ಕಾರದಿಂದ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.